# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **450 (521)** |
| ಸದಸ್ಯರ ಹೆಸರು | : | **ಶ್ರೀ ಎಸ್.ವಿ.ಸಂಕನೂರ (ಪದವೀಧರರ ಕ್ಷೇತ್ರ)** |
| ಉತ್ತರಿಸುವ ದಿನಾಂಕ | : | **19-07-2024** |
| ಉತ್ತರಿಸುವವರು | : | **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.** |

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>(ಅ)</td><td>ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇದು ಯಾವ ವರ್ಷ ಕಾರ್ಯಾರಂಭ ಮಾಡಿದೆ:</td><td>ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇದನ್ನು 2016ರಲ್ಲಿ ಪ್ರಾರಂಭಿಸಲಾಗಿದ್ದು, 2017ನೇ ಸಾಲಿನಿಂದ ಶೈಕ್ಷಣಿಕ ಚಟುವಟಿಕೆಗಳನ್ನು ಆರಂಭಿಸಿದೆ.</td></tr>
<tr><td>(ಆ)</td><td>ಈ ಒಂದು ವಿಶ್ವವಿದ್ಯಾಲಯಕ್ಕೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಖಾಯಂ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಎಷ್ಟು ಹುದ್ದೆಗಳಿಗೆ ಹಾಗೂ ಯಾವಾಗ ಅನುಮತಿ ನೀಡಿದೆ; (ಮಾಹಿತಿ ನೀಡುವುದು)</td><td>ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಹಾಗೂ ಆರ್ಥಿಕ ಇಲಾಖೆಯು ನೇರ ನೇಮಕಾತಿಗೆ ಸಹಮತಿಸಿರುವ ಹುದ್ದೆಗಳ ವಿವರಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ:-<br><table><tr><th>ಕ್ರ.ಸಂ.</th><th>ಹುದ್ದೆಗಳ ವಿವರ</th><th>ಒಟ್ಟು</th></tr><tr><td>1.</td><td>ಮಂಜೂರಾದ ಬೋಧಕ ಹುದ್ದೆಗಳು</td><td>84</td></tr><tr><td>2.</td><td>ಮಂಜೂರಾದ ಭೋಧಕೇತರ ಹುದ್ದೆಗಳು</td><td>91</td></tr><tr><td colspan="2">ಒಟ್ಟು ಹುದ್ದೆಗಳು</td><td>175</td></tr></table><br>ಕರ್ನಾಟಕ ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಖಾಯಂ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 496 ವೆಚ್ಚ-6 2021, ದಿನಾಂಕ:20.03.2023ರಲ್ಲಿ 15 ಬೋಧಕ ಹುದ್ದೆ ಹಾಗೂ 17 ಬೋಧಕೇತರ ಹುದ್ದೆಗಳಿಗೆ ಸಹಮತಿ ನೀಡಿದೆ.</td></tr>
<tr><td>(ಇ)</td><td>ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ದಲ್ಲಿ ಖಾಯಂ ಆಧಾರದ ಮೇಲೆ ಹುದ್ದೆ ತುಂಬಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ;</td><td>ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.</td></tr>
</table>

| | | |
|---|---|---|
| (ಈ) | ಗ್ರಾಮೀಣ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕವಾಗಿ/ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಿವರ.<br><br>➤ ಬೋಧಕ (ಗುತ್ತಿಗೆ ಆಧಾರದ ಮೇಲೆ) -58<br>➤ ಬೋಧಕೇತರ (ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ) -77<br>**ಒಟ್ಟು:135** |
| (ಉ) | ಈ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕ ಆಧಾರದ ಮೇಲೆ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಖಾಯಂ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಸಂದರ್ಭದಲ್ಲಿ ವಯೋಮಿತಿ ಸಡಿಲಿಕೆ ಹಾಗೂ ವೇಟೇಜ್ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ಮಾಹಿತಿ ನೀಡುವುದು) | ಬೋಧಕ ಹುದ್ದೆಗಳಿಗೆ ಯುಜಿಸಿ ನಿಗದಿಗೊಳಿಸಿರುವ ನೀತಿ ನಿಯಮಗಳನುಸಾರ ನೇಮಕಾತಿ ಮಾಡಿಕೊಳ್ಳಬೇಕಾಗಿರುವುದರಿಂದ ಹಾಲಿ ತಾತ್ಕಾಲಿಕ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರಿಗೆ ಪೂರಕ ಅರ್ಹತೆಯನ್ನಾಗಿ (Weightage) ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br><br>ವಿಶ್ವವಿದ್ಯಾಲಯದ ಬೋಧಕೇತರ ಸಿಬ್ಬಂದಿಗಳ ನೇಮಕಾತಿಗಾಗಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವವರ ಸಿಬ್ಬಂದಿಗೆ ಪೂರಕ ಅರ್ಹತೆಯನ್ನಾಗಿ ( Weightage ) ಪರಿಗಣಿಸಲು ಅವಕಾಶವಿರುತ್ತದೆ. |
| (ಊ) | ಗ್ರಾಮೀಣ ವಿಶ್ವವಿದ್ಯಾಲಯದಲ್ಲಿ ಆರ್.ಡಿ.ಪಿ.ಆರ್ ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳಿಗೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಹಾಗೂ ಎನ್ ಆರ್ ಎಲ್ ಎಮ್ ಮತ್ತು ಮನರೇಗಾ ಯೋಜನೆಗಳಲ್ಲಿ ನೇಮಕಾತಿ ಮಾಡಿಕೊಳ್ಳುವಲ್ಲಿ ಆದ್ಯತೆ ನೀಡುವ ಕುರಿತು ರಚನೆಯಾದ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆರ್ ಡಿ ಪಿ ಆರ್ 293 ಜಿಪಸ 2021, ದಿನಾಂಕ:04.10.2021 ರನ್ವಯ, ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯು ಈ ಸಂಬಂಧವಾಗಿ ಸಭೆಗಳನ್ನು ನಡೆಸಿದ್ದು, ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುವುದಿಲ್ಲ. ಸಮಿತಿ ವರದಿ ನೀಡಿದ ನಂತರ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳಲಾಗುವುದು. |

**ಸಂಖ್ಯೆ: ಗ್ರಾಅಪಂರಾ 112 ಜಿಪಸ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು